ಕರ್ನಾಟಕ ಪರೀಕ್ಷಾ ಪ್ರಾಧಿಕಾರ
Karnataka Examinations Authority

ಸಂಖ್ಯೆ : ಇಡಿ/ಕೆಇಎ/ಆಡಳಿತ/ಸಿ.ಆರ್.10/2022

ದಿನಾಂಕ: 17.02.2024

**ಕಾಲೇಜು ಶಿಕ್ಷಣ ಇಲಾಖೆಯಲ್ಲಿ ಖಾಲಿ ಇರುವ ಪ್ರಾಂಶುಪಾಲರು (ಯುಜಿ) ಹುದ್ದೆಗಳ ನೇಮಕಾತಿ**

**ತಾತ್ಕಾಲಿಕ ಮೆರಿಟ್ ಪಟ್ಟಿಯಲ್ಲಿ ಜೇಷ್ಠತೆ ನಿರ್ಧರಿಸಲು ದಾಖಲೆಗಳ ಪರಿಶೀಲನೆ.**

ಕಾಲೇಜು ಶಿಕ್ಷಣ ಇಲಾಖೆಯಲ್ಲಿನ ಪ್ರಾಂಶುಪಾಲರು(ಯುಜಿ) ಹುದ್ದೆಗಳಿಗೆ ಕರ್ನಾಟಕ ಪರೀಕ್ಷಾ ಪ್ರಾಧಿಕಾರದಿಂದ ನಡೆಸಲಾದ ಸ್ಪರ್ಧಾತ್ಮಕ ಪರೀಕ್ಷೆಯಲ್ಲಿ ಅಭ್ಯರ್ಥಿಗಳು ಪಡೆದ ಅಂಕಗಳ ಆಧಾರದ ಮೇಲೆ ತಾತ್ಕಾಲಿಕ ಮೆರಿಟ್ ಪಟ್ಟಿಯನ್ನು ದಿನಾಂಕ 20.12.2023 ರಂದು ಅಭ್ಯರ್ಥಿಗಳ ಮಾಹಿತಿಗಾಗಿ ಪ್ರಾಧಿಕಾರದ ವೆಬ್‌ಸೈಟ್ http://kea.kar.nic.in ನಲ್ಲಿ ಪ್ರಕಟಿಸಲಾಗಿರುತ್ತದೆ.

ಮುಂದುವರೆದು, ದಿನಾಂಕ 20.12.2023 ರಂದು ಪ್ರಕಟಿಸಲಾದ ತಾತ್ಕಾಲಿಕ ಮೆರಿಟ್ ಪಟ್ಟಿಯಲ್ಲಿ ಕೆಲವು ಅಭ್ಯರ್ಥಿಗಳು ಒಂದೇ ಅಂಕಗಳನ್ನು ಪಡೆದು ಒಂದೇ ಜನ್ಮ ದಿನಾಂಕವನ್ನು ಹೊಂದಿರುತ್ತಾರೆ. ಅದರಂತೆ ಒಟ್ಟು 25 ಅಭ್ಯರ್ಥಿಗಳಿಗೆ, ಅಧಿಸೂಚನೆಯಲ್ಲಿ ನಿಗದಿಗೊಳಿಸಿದ ವಿದ್ಯಾರ್ಹತೆಗಳ ಪ್ರಮಾಣ ಪತ್ರಗಳನ್ನು ಮತ್ತು ಇಲಾಖೆಯಲ್ಲಿ/ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಿರುವ ಸೇವಾ ಅವಧಿಯ ಪ್ರಮಾಣ ಪತ್ರವನ್ನು, ಪ್ರಾಧಿಕಾರಕ್ಕೆ ದಿನಾಂಕ 14.02.2024 ಬೆಳಿಗ್ಗೆ 11.00 ಘಂಟೆಗೆ ತಪ್ಪದೆ ಹಾಜರುಪಡಿಸುವಂತೆ ಸೂಚಿಸಲಾಗಿತ್ತು.

ಆದರೆ ಕೆಲವು ಅಭ್ಯರ್ಥಿಗಳು ಗೈರುಹಾಜರಾದ ಕಾರಣ, ದಿನಾಂಕ: 14.02.2024 ರಂದು ಗೈರುಹಾಜರಾದ ಮತ್ತು ದಾಖಲೆಗಳ ಪರಿಶೀಲನೆಯು ಅಪೂರ್ಣಗೊಂಡ ಅಭ್ಯರ್ಥಿಗಳಿಗೆ ಮತ್ತೊಮ್ಮೆ ಈ ಕೆಳಕಂಡ ದಿನಾಂಕದಂದು ಕಾಲಾವಕಾಶ ನೀಡಲಾಗಿದ್ದು, ಅಧಿಸೂಚನೆಯಲ್ಲಿ ನಿಗದಿಗೊಳಿಸಿದ ವಿದ್ಯಾರ್ಹತೆಗಳ ಪ್ರಮಾಣ ಪತ್ರಗಳನ್ನು, ಅರ್ಹತಾ ಷರತ್ತುಗಳಲ್ಲಿ ನಿಗದಿಗೊಳಿದ ಅರ್ಹತಾ ಪ್ರಮಾಣ ಪತ್ರಗಳನ್ನು ಮತ್ತು ಇಲಾಖೆಯಲ್ಲಿ/ಸಂಸ್ಥೆಯಲ್ಲಿ ಕಾರ್ಯನಿರ್ವಹಿಸಿರುವ ಒಟ್ಟು ಸೇವಾ ಅವಧಿಯ ಪ್ರಮಾಣ ಪತ್ರವನ್ನು, ದಾಖಲೆಗಳ ಪರಿಶೀಲನೆಗೆ ಖುದ್ದು ಹಾಜರಾಗಿ ದಿನಾಂಕ 22.02.2024 ರಂದು ಬೆಳಿಗ್ಗೆ 11.00 ಘಂಟೆಗೆ ತಪ್ಪದೆ ಸಲ್ಲಿಸತಕ್ಕದ್ದು.

ಈ ದಾಖಲೆಗಳ ಪರಿಶೀಲನೆಯು ಜೇಷ್ಠತೆಯನ್ನು ನಿರ್ಧರಿಸಲು ಮಾತ್ರವೇ ಹೊರತು ನೇಮಕಾತಿಗೆ ಮೂಲ ದಾಖಲೆಗಳ ಪರಿಶೀಲನೆಯೆಂದು ಭಾವಿಸಬಾರದು.

ಅಪೂರ್ಣ ಅಥವಾ ಜೆರಾಕ್ಸ್ ಪ್ರತಿಗಳ್ನು ಮೂಲ ದಾಖಲೆಗಳ ಪರಿಶೀಲನೆಯಲ್ಲಿ ಪುರಸ್ಕರಿಸಲಾಗುವುದಿಲ್ಲ.

ಸಹಿ/-
ಕಾರ್ಯನಿರ್ವಾಹಕ ನಿರ್ದೇಶಕರು

**18ನೇ ಅಡ್ಡ ರಸ್ತೆ, ಸಂಪಿಗೆ ರಸ್ತೆ, ಮಲ್ಲೇಶ್ವರಂ, ಬೆಂಗಳೂರು – 560 012**
18th Cross, Sampige Road, Malleshwaram, Bengaluru - 560 012.
Phone: 080 - 23 564 583, 23 460 460, 23 361 786, Fax: 080 - 23 461 576
e-mail : keauthority-ka@nic.in Website : http://kea.kar.nic.in